# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 55

**ಮಾನ್ಯ ಸದಸ್ಯರ ಹೆಸರು** : ಶ್ರೀ ಕೆ. ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)

**ಉತ್ತರಿಸಬೇಕಾದ ದಿನಾಂಕ** : 13.02.2023

**ಉತ್ತರಿಸಬೇಕಾದ ಸಚಿವರು** : ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

| ಕ್ರ ಸಂ | ಪ್ರಶ್ನೆಗಳು | ಉತ್ತರ |
|---|---|---|
| ಅ) | ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಜೀವರಕ್ಷಕ ಔಷಧಿಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. |
| ಆ) | ಬಂದಿದ್ದಲ್ಲಿ; ಯಾವ ಯಾವ ಜೀವರಕ್ಷಕ ಔಷಧಿಗಳ ಕೊರತೆ ಇದೆ; | ಅಗತ್ಯ ಜೀವರಕ್ಷಕ ಔಷಧಗಳು 147 ಆಗಿರುತ್ತದೆ. ವಿವರಗಳು **ಅನುಬಂಧ**ರಲ್ಲಿ ನೀಡಲಾಗಿದೆ. ಇವುಗಳಲ್ಲಿ 112 ಔಷಧಗಳ ದಾಸ್ತಾನು ಲಭ್ಯವಿದ್ದು, ಉಳಿದ 35 ಔಷಧಿಗಳನ್ನು ಸ್ಥಳೀಯ ಹಂತದಲ್ಲಿ ರಾಷ್ಟ್ರೀಯ ಆರೋಗ್ಯ ಅಭಿಯಾನದ ಕಾರ್ಯಕ್ರಮದಡಿ ಖರೀದಿಸಲು 2022-23 ಸಾಲಿನಲ್ಲಿ ಒಟ್ಟು ಮೊತ್ತ ರೂ.1864.2 ಲಕ್ಷಗಳ ಅನುದಾನವನ್ನು ಜಿಲ್ಲೆಗಳಿಗೆ ಹಂಚಿಕೆ ಮಾಡಲಾಗಿದೆ. ಇದಲ್ಲದೇ ಸರ್ಕಾರಿ ಆಸ್ಪತ್ರೆಗಳಲ್ಲಿ ಲಭ್ಯವಿರುವ ಇತರೆ ಅನುದಾನದಲ್ಲಿಯೂ ಸಹ ಜೀವರಕ್ಷಕ ಔಷಧಿಗಳನ್ನು ನಿಯಮಾನುಸಾರ ಸ್ಥಳೀಯವಾಗಿ ಖರೀದಿಸಲು ಸೂಚನೆ ನೀಡಲಾಗಿದೆ. |
| ಇ) | ಔಷಧಿಗಳು ಕೊರತೆಯಾಗದಿರುವಂತೆ ನೋಡಿಕೊಳ್ಳುವಲ್ಲಿ ಸರ್ಕಾರ ವಿಫಲವಾಗಲು ಕಾರಣವೇನು; | ಉದ್ಭವಿಸುವುದಿಲ್ಲ. |
| ಈ) | ಈ ಜೀವರಕ್ಷಕ ಔಷಧಿಗಳ ಕೊರತೆಯಿಂದ ಸಾವನ್ನಪ್ಪಿದವರ ಸಂಖ್ಯೆ ಎಷ್ಟು? (ಮಾಹಿತಿ ನೀಡುವುದು) | ಜೀವರಕ್ಷಕ ಔಷಧಿಗಳ ಕೊರತೆಯಿಂದ ಯಾವುದೇ ಸಾವುಗಳು ಸಂಭವಿಸಿರುವುದು ವರದಿಯಾಗಿರುವುದಿಲ್ಲ. |

**ಸಂಖ್ಯೆ: ಆಕುಕ 03 ಎಸ್.ಟಿ.ಕ್ಯೂ 2022**

**(ಡಾ|| ಕೆ.ಸುಧಾಕರ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು